ಆ) ಗುಲ್ಬರ್ಗದ ಅಶೋಕ ಜನಾರ್ಧನ್ ರಾವ್ ಇವರು ತಾವು ಸಾವದಿಗಿಯಲ್ಲಿ (3000) ಮೂರು ಸಾವಿರ ತಗ್ಗುಗಳನ್ನು ತೋಡಿದ್ದು ಇದಕ್ಕೆ ಹಣವನ್ನು ಪಾವತಿ ಮಾಡಿಲ್ಲವೆಂದು ಮಾನ್ಯ ವಿಧಾನ ಪರಿಷತ್ ಸಭಾಪತಿಗಳಿಗೆ ದೂರು ನೀಡಿದ್ದು ಈ ಬಗ್ಗೆ ಮಾನ್ಯ ಸಭಾಪತಿಗಳಿಗೆ ಆಪಾದನೆಯು ಸತ್ಯಕ್ಕೆ ದೂರವಾಗಿರುತ್ತದೆ ಎಂದು ಉಪ ಆರಣ್ಯ ಸಂರಕ್ಷಣಾಧಿಕಾರಿ, ಗುಲ್ಬರ್ಗ (ಪ್ರಾದೇಶಿಕ ಆರಣ್ಯ ವಿಭಾಗ) ಇವರು ವಿವರವಾದ ವರದಿಯನ್ನು ಸಲ್ಲಿಸಿರುತ್ತಾ.

ವಿಷಯ:- ಉತ್ತರ ಕನ್ನಡ ಜಿಲ್ಲೆಯ ಕಾಲೇಜುಗಳಲ್ಲಿ ಸ್ನಾತಕೋತ್ತರ ಶಿಕ್ಷಣ ಪ್ರಾರಂಭ.

ಚುಕ್ಕೆ ರಹಿತ ಪ್ರಶ್ನೆ ಸಂಖ್ಯೆ : 267(497)

ಡಾ: ಯು.ಚಿತ್ತರಂಜನ್ (ಭಟ್ಕಳ):- ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಉತ್ತರ ಕನ್ನಡ ಜಿಲ್ಲೆಯ ಅನೇಕ ಕಾಲೇಜುಗಳಲ್ಲಿ ಉತ್ತಮ ಸೌಲಭ್ಯವಿದ್ದರೂ ಕೂಡ ವಿಜ್ಞಾನ, ಕಲೆ ಮತ್ತು ವಾಣಿಜ್ಯ ವಿಭಾಗದಲ್ಲಿ ಸ್ನಾತಕೋತ್ತರ ಶಿಕ್ಷಣ ನೀಡುವ ವ್ಯವಸ್ಥೆ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ ಈ ಬಗ್ಗೆ ಸರ್ಕಾರ ಕ್ರಮ ಕೈಗೊಳ್ಳುವುದೇ?

ಶ್ರೀ ಡಿ.ಮಂಜುನಾಥ್ (ಉನ್ನತ ಶಿಕ್ಷಣ ಸಚಿವರು) :-

ಅ) ಸಂಯೋಜಿತವಾಗಿರುವ ವಿಜ್ಞಾನ, ಕಲಾ ಮತ್ತು ವಾಣಿಜ್ಯ ಕಾಲೇಜುಗಳಲ್ಲಿ ಸ್ನಾತಕೋತ್ತರ ಕೋರ್ಸನ್ನು ಪ್ರಾರಂಭಿಸಲು ಕರ್ನಾಟಕ ವಿಶ್ವವಿದ್ಯಾಲಯವು ತನ್ನ ಧೋರಣೆಯಂತೆ ಅನುಮತಿಸುತ್ತಿಲ್ಲ.

ಆ) ಉದ್ಭವಿಸುವುದಿಲ್ಲ.

ವಿಷಯ:- ವಿಜಾಪುರ ಜಿಲ್ಲೆಯಲ್ಲಿ ಮಾನ್ಯತೆ ಪಡೆದ ಮಾಧ್ಯಮಿಕ ಶಾಲೆಗಳ ಸಂಖ್ಯೆ.